# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಅಧಿಕಾರಗಳನ್ನು ಚಲಾಯಿಸಿ ಆಡಳಿತಗಾರರ ದಿನಾಂಕ:24–04–2015ರ ನಡವಳಿಗಳು

## ವಿಷಯದ ಸಂಖ್ಯೆ : 55 / 2015–16

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಆಡಳಿತ ವ್ಯಾಪ್ತಿಯಲ್ಲಿ 2015–16ನೇ ಸಾಲಿನ ಆಸ್ತಿ ತೆರಿಗೆ ರಿಯಾಯಿತಿ ಅವಧಿಯನ್ನು ವಿಸ್ತರಿಸುವ ಬಗ್ಗೆ.

**ಪ್ರಸ್ತಾವನೆ:**

ಟಿಪ್ಪಣಿಯಲ್ಲಿ ವಿವರಿಸಿರುವಂತೆ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಆಡಳಿತ ವ್ಯಾಪ್ತಿಯಲ್ಲಿ 2015–16ನೇ ಸಾಲಿಗೆ ಸಂಬಂಧಪಟ್ಟಂತೆ ಆರ್ಥಿಕ ವರ್ಷದ ಪೂರ್ಣ ಆಸ್ತಿ ತೆರಿಗೆಯನ್ನು ದಿನಾಂಕ: 30–04–2015ರ ಒಳಗೆ ಪಾವತಿಸಿದ್ದಲ್ಲಿ ಶೇಕಡ 5 ರಷ್ಟು ರಿಯಾಯಿತಿಯನ್ನು ನೀಡಲು ಕೆ.ಎಂ.ಸಿ.ಕಾಯ್ದೆ 1976ರ ನಿಯಮ 108ಎ ಅನ್ವಯ ಅವಕಾಶ ಕಲ್ಪಿಸಲಾಗಿದೆ. ರಿಯಾಯಿತಿ ಅವಧಿಯನ್ನು ವಿಸ್ತರಿಸುವ ಬಗ್ಗೆ ಪಾಲಿಕೆ ಸಭೆ ಹಾಗೂ ಸರ್ಕಾರದ ಅನುಮೋದನೆ ಪಡೆಯಲು ಕಾಯ್ದೆಯಲ್ಲಿ ಅವಕಾಶ ಕಲ್ಪಿಸಲಾಗಿದೆ.

ಮುಂದುವರೆದಂತೆ ಪಾಲಿಕೆಯ ಸಿಬ್ಬಂದಿಗಳು ಪ್ರಸ್ತುತ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಹಾಗೂ ಮತದಾರರ ಪಟ್ಟಿಯ ಪರಿಷ್ಕರಣೆ ಕಾರ್ಯದಲ್ಲಿ ಪೂರ್ಣವಾಗಿ ತೊಡಗಿರುವುದರಿಂದ ತೆರಿಗೆದಾರರಿಂದ ಆಸ್ತಿ ತೆರಿಗೆಯನ್ನು ನಿಗಧಿತ ಅವಧಿಯೊಳಗಾಗಿ ಪಾವತಿಸಿಕೊಳ್ಳಲು ಕಷ್ಟಸಾಧ್ಯವಾಗಿರುತ್ತದೆ. ಕಳೆದ ಸಾಲಿನಲ್ಲಿಯೂ ಸಹ ನಗರ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘ ಹಾಗೂ ಹಲವಾರು ಸಂಘ ಸಂಸ್ಥೆಗಳು ಮನವಿ ಪತ್ರ ಸಲ್ಲಿಸಿ ರಿಯಾಯಿತಿ ಅವಧಿಯನ್ನು ವಿಸ್ತರಿಸಲು ಕೋರಿರುವುದರಿಂದ ಪಾಲಿಕೆ ಸಭೆಯಲ್ಲಿ ನಿರ್ಣಯ ಕೈಗೊಂಡು ಸರ್ಕಾರದ ಅನುಮೋದನೆಯನ್ನು ಸಹ ಪಡೆಯಲಾಗಿರುತ್ತದೆ.

ಮೇಲ್ಕಂಡ ಅಂಶಗಳ ಹಿನ್ನಲೆಯಲ್ಲಿ, ತೆರಿಗೆದಾರರ ಅನುಕೂಲಕ್ಕಾಗಿ 2015–2016ನೇ ಸಾಲಿನ ಆಸ್ತಿ ತೆರಿಗೆಯನ್ನು ಪೂರ್ಣವಾಗಿ ಪಾವತಿಸುವವರಿಗೆ ಶೇಕಡ 5 ರಷ್ಟು ರಿಯಾಯಿತಿ ನೀಡುವ ಅವಧಿಯನ್ನು ಇನ್ನೂ 30 ದಿನಗಳಿಗೆ ವಿಸ್ತರಿಸಿ ದಿನಾಂಕ:30–05–2015ರ ಒಳಗೆ ಪಾವತಿಸುವ ಎಲ್ಲಾ ಆಸ್ತಿ ತೆರಿಗೆದಾರರಿಗೆ ಶೇಕಡ 5 ರಷ್ಟು ರಿಯಾಯಿತಿ ನೀಡುವ ಬಗ್ಗೆ ಸೂಕ್ತ ತೀರ್ಮಾನಕ್ಕಾಗಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಅಧಿಕಾರವನ್ನು ಚಲಾಯಿಸಿ ಮಾನ್ಯ ಆಡಳಿತಗಾರರ ಮುಂದೆ ಮಂಡಿಸಿರುವ ಆಯುಕ್ತರವರ ದಿನಾಂಕ:20–04–2015ರ ಟಿಪ್ಪಣಿ.

**ತೀರ್ಮಾನ:** **"ಆಯುಕ್ತರವರ ದಿನಾಂಕ:20–04–2015ರ ಟಿಪ್ಪಣಿಯನ್ನು ಒಪ್ಪಿದೆ".**

ಆಡಳಿತಗಾರರು